ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/53/ಎಸಿಎಂ(1)/2019-20

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:13-03-2020.

-:: ಸುತ್ತೋಲೆ ::-

ವಿಷಯ:- Novel Coronavirus (COVID-19) ರೋಗ ನಿಮಿತ್ತ ಸರ್ಕಾರಿ, ಅನುದಾನಿತ, ಖಾಸಗಿ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಕಾಲೇಜುಗಳ ವಿದ್ಯಾರ್ಥಿಗಳಿಗೆ ರಜೆ ಘೋಷಿಸುವ ಬಗ್ಗೆ.

ಉಲ್ಲೇಖ:- ಸರ್ಕಾರದ ಪತ್ರ ಸಂ. ಇಡಿ 107 ಯುಎನ್ಇ 2020, ದಿ:13-03-2020.

-0000000-

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿ:13-03-2020ರಂದು ನಡೆದ ಸಭೆಯಲ್ಲಿ ಸೂಚಿಸಿದಂತೆ, Novel Coronavirus (COVID-19) ರೋಗವು ಸಾಂಕ್ರಾಮಿಕವಾಗಿ ಹರಡುತ್ತಿದ್ದು, ಈ ಬಗ್ಗೆ ಕರ್ನಾಟಕ ಸರ್ಕಾರವು Coronavirus ರೋಗವನ್ನು ಸಾಂಕ್ರಾಮಿಕ ರೋಗವೆಂದು ಘೋಷಿಸಿರುವ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ, ಅನುದಾನಿತ, ಖಾಸಗಿ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ **ದಿನಾಂಕ:14-03-2020 ರಿಂದ ಜಾರಿಗೆ ಬರುವಂತೆ 15 ದಿನಗಳ ಕಾಲ ರಜೆ** ಘೋಷಿಸಲಾಗಿದೆ.

**ಮುಂದುವರೆದು ಎಂದಿನಂತೆ ಕಾಲೇಜಿನ ಸಿಬ್ಬಂದಿವರ್ಗದವರು ಕಛೇರಿಗಳಲ್ಲಿ ಕೆಲಸ ಕಾರ್ಯಗಳನ್ನು ನಿರ್ವಹಿಸುವಂತೆ ಸೂಚಿಸಲಾಗಿದೆ.**

ನಿರ್ದೇಶಕರು

13/03/20 13/03/2020

ಇವರಿಗೆ,

*ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ, ಖಾಸಗಿ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ.*

ಪ್ರತಿ ಮಾಹಿತಿಗಾಗಿ:-

1. ಉಪ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ(ಉನ್ನತ ಶಿಕ್ಷಣ, ಐಟಿ & ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ), ವಿಕಾಸಸೌಧ, ಬೆಂಗಳೂರು ಇವರಿಗೆ ಕಳುಹಿಸುತ್ತಾ ಮಾನ್ಯ ಉಪ ಮುಖ್ಯಮಂತ್ರಿಯವರ ಗಮನಕ್ಕೆ ತರಲು ಕೋರಿದೆ.
2. ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ(ಉನ್ನತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ರಿಜಿಸ್ಟ್ರಾರ್, ವಿಶ್ವೇಶ್ವರಾಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನ ಸಂಗಮ, ಬೆಳಗಾವಿ.
4. ಜಂಟಿ ನಿರ್ದೇಶಕರು(ಪರೀಕ್ಷೆ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
5. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
6. ಸಂಯೋಜನಾಧಿಕಾರಿಗಳು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು - ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
7. ನಿರ್ದೇಶಕರ ಆಪ್ತಶಾಖೆಗೆ.
8. ಹೆಚ್ಚುವರಿ ಪ್ರತಿ.